RNU AIR DHARWAD

SEPTEMBER 20, 2026

AKASHAVANI - DHARWAD

PRADESH SAMACHARA (KANNADA) 12.00 P.M.

<><><>

ಆಕಾಶವಾಣಿ

ಪ್ರದೇಶ ಸಮಾಚಾರ

<><><>

'ವೋಕಲ್ ಫಾರ್ ಲೋಕಲ್', ಅಭಿಯಾನಕ್ಕೆ ಕೇಂದ್ರ ಸರ್ಕಾರ ಪ್ರೋತ್ಸಾಹ ಹಾಗೂ ಉತ್ತೇಜನ ನೀಡುತ್ತಿದೆ. ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮದಾರರು ಹಾಗೂ ಕುಶಲಕರ್ಮಿಗಳು, ಈ ಅಭಿಯಾನದ ಹಿನ್ನೆಲೆ, ತಮ್ಮ ಮಾರುಕಟ್ಟೆ ವಿಸ್ತರಣೆಯ ಅವಕಾಶ ಪಡೆದಿದ್ದಾರೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಆಶಯದಂತೆ, ತಲೆಮಾರುಗಳಿಂದ ಸ್ಥಳೀಯ ಕುಶಲಕರ್ಮಿಗಳು ತಯಾರಿಸುತ್ತಿರುವ ಕರಕುಶಲ ವಸ್ತುಗಳು, ಕೈಮಗ್ಗ ಉತ್ಪನ್ನಗಳಿಗೆ ಮೌಲ್ಯ, ಘನತೆ ಹಾಗೂ ಬೆಂಬಲ ನೀಡುವುದು ಈ ಅಭಿಯಾನದ ಉದ್ದೇಶವಾಗಿದೆ.

<><><>

ರಾಜ್ಯದ ಬರ ಪರಿಸ್ಥಿತಿ ನಿಭಾಯಿಸಿ, ಜನರಿಗೆ ಕುಡಿಯುವ ನೀರು, ಜಾನುವಾರುಗಳಿಗೆ ಮೇವು ಪೂರೈಸಲು ಸರ್ಕಾರ ಕ್ರಮ ಕೈಗೊಂಡಿದೆ. ಪ್ರತಿ ವಿಧಾನಸಭಾ ಕ್ಷೇತ್ರಕ್ಕೆ 1 ಕೋಟಿ ರೂಪಾಯಿ ಹಾಗೂ ಜಿಲ್ಲೆಗಳಿಗೆ, 3 ರಿಂದ 4 ಕೋಟಿ ರೂಪಾಯಿ ಅನುದಾನ ಬಿಡುಗಡೆ ಮಾಡಲಾಗಿದೆ ಎಂದು ಉಪ ಮುಖ್ಯಮಂತ್ರಿ ಡಾಕ್ಟರ ಜಿ. ಪರಮೇಶ್ವರ ತಿಳಿಸಿದ್ದಾರೆ. ಕುಡಿಯುವ ನೀರು ಹಾಗೂ ಮೇವಿನ ಸಮಸ್ಯೆ ಇರುವ ಕಡೆ, ಹಣವನ್ನು ಸೂಕ್ತ ರೀತಿಯಲ್ಲಿ ಬಳಸಿಕೊಳ್ಳುವಂತೆ ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿದೆ ಎಂದು ಅವರು ತಮ್ಮ ಎಕ್ಸ್ ಖಾತೆ ಮೂಲಕ ತಿಳಿಸಿದ್ದಾರೆ.

<><><>

ಕೊಪ್ಪಳ ಜಿಲ್ಲೆಯ, ಸಮಗ್ರ ಅಭಿವೃದ್ಧಿಯ ದೃಷ್ಟಿಯಿಂದ, ಕಿಷ್ಕಿಂದೆ ಭಾಗದಲ್ಲಿ, ಸಚಿವ ಸಂಪುಟ ಸಭೆ ಆಯೋಜಿಸಲು, ಮುಖ್ಯಮಂತ್ರಿಯವರಿಗೆ ಮನವಿ ಮಾಡುವುದಾಗಿ, ಜಿಲ್ಲಾ ಉಸ್ತುವಾರಿ ಸಚಿವ, ಶಿವರಾಜ ತಂಗಡಗಿ, ತಿಳಿಸಿದ್ದಾರೆ. ಕೊಪ್ಪಳ ಜಿಲ್ಲೆ, ಗಂಗಾವತಿಯಲ್ಲಿ, ಪ್ರಜಾಸೇವಾ ಆಂದೋಲನ ಸಭೆಯಲ್ಲಿ ಅವರು ಮಾತನಾಡಿದರು. ಸಿಂಧನೂರು ಹಾಗೂ ರಾಯಚೂರ ಭಾಗಕ್ಕೆ, ರೈತರ ಅಪೇಕ್ಷೆಯಂತೆ, ನಾಲ್ಕಾರು ದಿನಗಳ ಕಾಲ, 2 ಸಾವಿರ ಕ್ಯುಸೆಕ್ ನೀರು ಹರಿಸಲು, ಅಧಿಕಾರಿಗಳಿಗೆ ಸೂಚಿಸಿದ್ದಾಗಿ, ಸಚಿವ ತಂಗಡಗಿ ನುಡಿದರು.

<><><>

ರಾಯಚೂರು ಜಿಲ್ಲೆ, ಲಿಂಗಸುಗೂರು ತಾಲೂಕು ಸರ್ಕಾರದಿಂದ ಬರಗಾಲ ಪೀಡಿತ ಪ್ರದೇಶ ಎಂದು ಘೋಷಣೆಯಾಗಿದೆ. ಸಂಬಂಧಿತ ಪರಿಹಾರ ಕಾರ್ಯಗಳು ಹಾಗೂ ಬೆಳೆ ಕಟಾವು ಪ್ರಯೋಗಗಳು ವಿವಿಧ ಇಲಾಖೆಗಳ ಸಮನ್ವಯದೊಂದಿಗೆ ನಡೆಯುತ್ತಿವೆ ಎಂದು ಜಿಲ್ಲಾಧಿಕಾರಿ ಎಸ್. ಪೂವಿತಾ ತಿಳಿಸಿದ್ದಾರೆ.

ಲಿಂಗಸುಗೂರು, ಸರ್ಕಾರಿ ಪದವಿಪೂರ್ವ ಕಾಲೇಜು ಆವರಣದಲ್ಲಿ ಆಯೋಜಿತ ಪ್ರಜಾಸೇವೆ ಆಂದೋಲನ ಸಭೆಗೆ ಚಾಲನೆ ನೀಡಿ ಮಾತನಾಡಿದರು. ಜಲಧಾರೆ ಯೋಜನೆಯಡಿ, ಲಿಂಗಸುಗೂರು ನೀರು ಶುದ್ಧೀಕರಣ ಘಟಕದಿಂದ, ಜಿಲ್ಲೆಯ ಸಾವಿರದ 400 ಕ್ಕೂ ಹೆಚ್ಚು ವಸತಿ ಪ್ರದೇಶಗಳಿಗೆ ಹಾಗೂ 7 ಸ್ಥಳೀಯ ಸಂಸ್ಥೆಗಳಿಗೆ ಕುಡಿಯುವ ನೀರು ಪೂರೈಸಲಾಗುತ್ತಿದೆ ಎಂದರು.

<><><>

ವಿಜಯನಗರ ಜಿಲ್ಲೆ, ಹರಪನ ಹಳ್ಳಿ, ತಾಲೂಕು ಪ್ರಜಾಸೇವಾ ಆಂದೋಲನ ಸಭೆಗೆ, ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಸ್ ಬಸವಂತಪ್ಪ ಚಾಲನೆ ನೀಡಿದರು. ತಾಲೂಕಿನ 37 ಗ್ರಾಮ ಪಂಚಾಯಿತಿಗಳಿಂದ ಸಾರ್ವಜನಿಕರ ಅಹವಾಲು, ದೂರು, ಸಮಸ್ಯೆ ಕುರಿತು ಅರ್ಜಿ ಸ್ವೀಕರಿಸಲು ಪ್ರತ್ಯೇಕ ಕೇಂದ್ರಗಳನ್ನು ತೆರೆಯಲಾಗಿತ್ತು.

<><><>

ಲಿಂಗಸುಗೂರು ಪಟ್ಟಣದಲ್ಲಿ ಆಯೋಜಿತ ಪ್ರಜಾಸೇವೆ ಆಂದೋಲನಾ ಸಭೆಯಲ್ಲಿ, ಒಟ್ಟು 89 ಅಹವಾಲುಗಳನ್ನು ಸ್ವೀಕರಿಸಲಾಗಿದೆ ಎಂದು ತೆಹಸೀಲ್ದಾರ ಸತ್ಯಮ್ಮ ತಿಳಿಸಿದ್ದಾರೆ.

<><><>

ರಾಯಚೂರು ಜಿಲ್ಲೆ, ಮಾನ್ವಿ ವಿಧಾನಸಭಾ ಕ್ಷೇತ್ರದ, ವಿವಿಧ ಗ್ರಾಮಗಳಲ್ಲಿ ಒಟ್ಟು 8 ಕೋಟಿ 80 ಲಕ್ಷ ರೂಪಾಯಿ ವೆಚ್ಚದ, ಅಭಿವೃದ್ಧಿ ಕಾಮಗಾರಿಗಳಿಗೆ ವಿಧಾನ ಪರಿಷತ್ ಸದಸ್ಯ ಎನ್.ಎಸ್ ಬೋಸರಾಜು ಹಾಗೂ ಶಾಸಕ ಹಂಪಯ್ಯ ನಾಯಕ ಜಂಟಿಯಾಗಿ ಭೂಮಿಪೂಜೆ ನೆರವೇರಿಸಿದರು.

<><><>

ಜನಪದರನ್ನು, ಜಾನಪದ ಲೋಕದೊಂದಿಗೆ ಬೆಸೆದಿಡುವ, ಎಚ್.ಎಲ್. ನಾಗೇಗೌಡರ ಆಶಯದ ಮುಂದುವರಿದ ಭಾಗ, ಲೋಕಸಿರಿ ಕಾರ್ಯಕ್ರಮ ಎಂದು, ರಾಜ್ಯ ಜಾನಪದ ಪರಿ ‘ತ್ತಿನ ಅಧ್ಯಕ್ಷ, ಪ್ರೊಫೆಸರ್ ಹಿ.ಚಿ.ಬೋರಲಿಂಗಯ್ಯ ಹೇಳಿದ್ದಾರೆ. ರಾಮನಗರದ ಜಾನಪದ ಲೋಕದಲ್ಲಿ, “ಲೋಕಸಿರಿ ತಿಂಗಳ ಅತಿಥಿ” ಕಾರ್ಯಕ್ರಮದಲ್ಲಿ, ಮಾತನಾಡಿದರು. ಖ್ಯಾತ ಜಾನಪದ ಕಲಾವಿದ, ಜೋಗಿಲ ಸಿದ್ದರಾಜು ಪಾಲ್ಗೊಂಡಿದ್ದರು.

<><><>

‘ವಿಕಸಿತ ಭಾರತ, ಗ್ರಾಮೀಣ ಉದ್ಯೋಗ ಖಾತ್ರಿ ಹಾಗೂ ಜೀವನೋಪಾಯ ಮಿಷನ್’, ವಿ.ಬಿ. ಜಿ ರಾಮ ಜಿ ಯೋಜನೆ ಅಡಿ, ಉದ್ಯೋಗ ಚೀಟಿ ನೀಡುವ ಅಭಿಯಾನದಡಿ, ಬಳ್ಳಾರಿ ಜಿಲ್ಲೆಯ, ಐದು ತಾಲೂಕುಗಳ, 100 ಗ್ರಾಮ ಪಂಚಾಯ್ತಿಗಳಲ್ಲಿ, ಜಾಬ್ ಕಾರ್ಡ್ ಸರ್ವೆ, ಜಿಲ್ಲಾ ಪಂಚಾಯ್ತಿ ಕೈಗೊಂಡಿತ್ತು. 731 ಕುಟುಂಬಗಳಿಗೆ, ಜಾಬ್ ಕಾರ್ಡು ನೀಡಲಾಗಿದೆ ಎಂದು, ಜಿಲ್ಲಾ ಪಂಚಾಯ್ತಿ ಸಿ.ಇ.ಓ. ಮಹಮ್ಮದ್ ಹಾರೀಸ್ ಸುಮೇರ್ ತಿಳಿಸಿದ್ದಾರೆ.

<><><>

ಕೋಲಾರ ಜಿಲ್ಲೆಯಲ್ಲಿ ಆಯೋಜಿತ, ’ರಾಷ್ಟ್ರೀಯ ಲೋಕ್ ಅದಾಲತ್’ ಕಾರ್ಯಕ್ರಮದಲ್ಲಿ, ಒಟ್ಟು 34 ಸಾವಿರದ 542 ಪ್ರಕರಣಗಳನ್ನು ರಾಜಿ–ಸಂಧಾನದ ಮೂಲಕ ಇತ್ಯರ್ಥಪಡಿಸಲಾಗಿದೆ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಪ್ರಭು ಎನ್. ಬಡಿಗೇರ್ ತಿಳಿಸಿದ್ದಾರೆ.

<><><>

ಭಾರತೀಯ ಹವಾಮಾನ ಇಲಾಖೆ, ಕರ್ನಾಟಕ ಸೇರಿದಂತೆ, ದಕ್ಷಿಣ ಭಾರತದ ವಿವಿಧೆಡೆಗಳಲ್ಲಿ ಇಂದು ಭಾರಿ ಮಳೆಯಾಗುವ ಸಾಧ್ಯತೆಯಿದೆ ಎಂದು ತಿಳಿಸಿದೆ.

<><><>

ಉಡುಪಿಯ ಮಲ್ಪೆ ಕಡಲ ತೀರದಲ್ಲಿ, ಭಾರತೀಯ ರಾಷ್ಟ್ರೀಯ ಸಾಗರ ಮಾಹಿತಿ ಸೇವೆಗಳ ಕೇಂದ್ರದ ಸಹಯೋಗದಲ್ಲಿ, 'ಸ್ವಚ್ಛ ಸಾಗರ, ಸುರಕ್ಷಿತ ಸಾಗರ' ಧ್ಯೇಯದಡಿ, ಸ್ವಚ್ಛತಾ ಶ್ರಮದಾನ ಜರುಗಿತು.

<><><>

ಕೇಂದ್ರ ಭೂ ವಿಜ್ಞಾನ ಸಚಿವಾಲಯದ ನೇತೃತ್ವದಲ್ಲಿ, ರಾಷ್ಟ್ರವ್ಯಾಪಿ ಅಭಿಯಾನದ ಭಾಗವಾಗಿ, ಉತ್ತರಕನ್ನಡ ಜಿಲ್ಲೆ ಕಾರವಾರದ, ರವೀಂದ್ರನಾಥ ಟ್ಯಾಗೋರ ಕಡಲತೀರದಲ್ಲಿ, 5ನೇ ಆವೃತ್ತಿಯ, ಕಡಲತೀರ ಸ್ವಚ್ಛತಾ ಅಭಿಯಾನ ನಡೆಯಿತು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ

<><><>